POLICE NEWS REGISTERED KA/BGW-1618/2024-26 REGD. WITH RNI NO. 36669/82 PAGES : 16 | POSTED AT BANGALORE PSO BG 560026 Every Tuesday | Publishing Date : 23.3.2025

# ಹುಡುಗಿಯರ ಎದೆ ಹಾಗೂ ಆ ಭಾಗ ನನಗಿಷ್ಟ; ವರ್ಮಾ ಮಾತಿಗೆ ನಾಚಿದ ಹುಡುಗಿ!



ನಿರ್ದೇಶಕ ರಾಮ್‌ಗೋಪಾಲ್ ವರ್ಮಾ ತಮ್ಮ ವಿವಾದಾತ್ಮಕ ಹೇಳಿಕೆಗಳಿಂದ ಸುದ್ದಿ ಆಗುತ್ತಿರುತ್ತಾರೆ. ಯಾವುದೇ ವಿಚಾರದ ಬಗ್ಗೆ ಆರ್‌ಜಿವಿ ತಮ್ಮದೇ ಶೈಲಿಯಲ್ಲಿ ಮಾತನಾಡುತ್ತಾರೆ. ರೇಣುಕಾಸ್ವಾಮಿ ಪ್ರಕರಣದ ಬಗ್ಗೆ ಕೂಡ ವರ್ಮಾ ಮಾತನಾಡಿದ್ದರು. ದರ್ಶನ್ ಮಾಡಿದ್ದು ಶ್ವಾನದ ಮೇಲೆ ಆನೆ ದಾಳಿ ಮಾಡಿದಂತೆ, ಸಣ್ಣ ವಿಚಾರಕ್ಕೆ ದರ್ಶನ್ ಅಂತ ನಿರ್ಧಾರ ತೆಗೆದುಕೊಳ್ಳಬಾರದಿತ್ತು ಎಂದಿದ್ದರು.

ಆಂಧ್ರ, ಸಿಎಂ ಚಂದ್ರಬಾಬು ನಾಯ್ಡು, ಡಿಸಿಎಂ ಪವನ್ ಕಲ್ಯಾಣ್ ಸೇರಿ ಕೆಲ ರಾಜಕೀಯ ಮುಖಂಡರ ಬಗ್ಗೆ ಸೋಶಿಯಲ್ ಮೀಡಿಯಾದಲ್ಲಿ ವರ್ಮಾ ಹಂಚಿಕೊಂಡಿದ್ದ ಪೋಸ್ಟ್ ವಿವಾದ ಸೃಷ್ಟಿಸಿತ್ತು. ದೂರು ದಾಖಲಾಗಿದೆ ನಿರ್ದೇಶಕ ಪೊಲೀಸ್ ವಿಚಾರಣೆ ಎದುರಿಸುವಂತಾಗಿತ್ತು. ಇದೀಗ ಹೆಣ್ಣು ಮಕ್ಕಳ ಖಾಸಗಿ ಭಾಗದ ಬಗ್ಗೆ ಮಾತನಾಡಿ ಮತ್ತೊಮ್ಮೆ ಆರ್‌ಜಿವಿ ಸುದ್ದಿಯಲ್ಲಿದ್ದಾರೆ.



ಸಿಕ್ಸಾಪಟ್ಟೆ ಬೋಲ್ಡ್ ಆಗಿ ಮಾತನಾಡುವ ರಾಮಗೋಪಾಲ್ ವರ್ಮಾ ಬೋಲ್ಡ್ ಪ್ರಶ್ನೆ ಎದುರಾದರೆ ಸುಮ್ಮನಿರುತ್ತಾರೆಯೇ? ಹುಡುಗಿಯೊಬ್ಬಳ ಪ್ರಶ್ನೆಗೆ ವರ್ಮಾ ನೇರಾನೇರ ಉತ್ತರ ವೈರಲ್ ಆಗ್ತಿದೆ. ಹುಡುಗಿಯೊಬ್ಬಳು ಹೋಗಿ ಆರ್‌ಜಿವಿ ಜೊತೆ ಮಾತನಾಡಿ ಫೋಟೊ ಕ್ಲಿಕ್ಕಿಸಿಕೊಂಡಿದ್ದಾಳೆ. ಬಳಿಕ ಸರ್, ನೀವು ಸಾಕಷ್ಟು ಹುಡುಗಿಯರನ್ನು ನೋಡಿದ್ದೀರಾ, ನಿಮಗೆ ಹುಡುಗಿಯರ ದೇಹದ ಯಾವ ಭಾಗ ಇಷ್ಟ ಎಂದು ಕೇಳಿದ್ದಾಳೆ.

ಹುಡುಗಿಯ ಪ್ರಶ್ನೆಗೆ ಉತ್ತರಿಸಿರುವ ಆರ್‌ಜಿವಿ ತಪ್ಪು ತಿಳಿದುಕೊಳ್ಳಲ್ಲ ಅಂದ್ರೆ ಹೇಳ್ತೀನಿ, ನಿಜ ಹೇಳಬೇಕು ಅಂದ್ರೆ ಹುಡುಗಿಯರ ಎದೆ ಹಾಗೂ ನಿತಂಬ ಅಂದರೆ ನನಗಿಷ್ಟ ಎಂದು ಖುಲ್ಲಂ ಖುಲ್ಲಾ ಹೇಳಿ ಶಾಕ್ ಕೊಟ್ಟಿದ್ದಾರೆ. ವರ್ಮಾ ಹೀಗೆ ಹೇಳುತ್ತಿದ್ದಂತೆ ಆ ಹುಡುಗಿ ನಾಚಿ ನೀರಾಗಿರುವುದನ್ನು ವೀಡಿಯೋದಲ್ಲಿ ನೋಡಬಹುದು.

ಅಂದಹಾಗೆ ಆ ಹುಡುಗಿಯ ಹೆಸರು ಪ್ರತ್ಯೂಷ. ಸೋಶಿಯಲ್ ಮೀಡಿಯಾದಲ್ಲಿ ತಮ್ಮ ರೀಲ್ಸ್ ಮೂಲಕ ಗಮನ ಸೆಳೆದಿದ್ದಾಳೆ. ರಾಮಗೋಪಾಲ್ ವರ್ಮಾ ಅವರನ್ನು ಭೇಟಿ ಮಾಡಿದ್ದು ಅವರ ಜೊತೆ ಮಾತನಾಡಿ ಸಾಕಷ್ಟು ವಿಚಾರಗಳನ್ನು ಕಲಿತಿದ್ದು ನಿಜಕ್ಕೂ ವಿಶೇಷ ಎಂದು ಆಕೆ ಸೋಶಿಯಲ್ ಮೀಡಿಯಾದಲ್ಲಿ ಬರೆದು ವೀಡಿಯೋ ಹಂಚಿಕೊಂಡಿದ್ದಾರೆ.

ಒಂದು ಕಾಲದಲ್ಲಿ ಅದ್ಭುತ ಸಿನಿಮಾಗಳನ್ನು ಕಟ್ಟಿಕೊಟ್ಟಿದ್ದ ರಾಮಗೋಪಾಲ್ ವರ್ಮಾ ಇತ್ತೀಚೆಗೆ ಸೈಲೆಂಟ್ ಆಗಿಬಿಟ್ಟಿದ್ದಾರೆ. ವಿವಾದಾತ್ಮಕ ಹೇಳಿಕೆಗಳಿಂದ ಸುದ್ದಿ ಆಗುತ್ತಿದ್ದಾರೆ. ಹೊಸ ಹೊಸ ನಾಯಕಿಯರನ್ನು ಪರಿಚಯಿಸಿ ಸಿಕ್ಸಾಪಟ್ಟೆ ಬೋಲ್ಡ್ ಹಾಡುಗಳು, ದೃಶ್ಯಗಳು ಇರುವ ಸಿನಿಮಾಗಳನ್ನು ಸುತ್ತಿಕೊಡುತ್ತಿದ್ದಾರೆ. ☯

# ನಿರ್ದೇಶಕ ಎ.ಟಿ. ರಘು ಇನ್ನಿಲ್ಲ

ರೆಬೆಲ್ ಸ್ಟಾರ್ ಅಂಬರೀಶ್ ಅಭಿನಯದ 27 ಚಿತ್ರಗಳಿಗೆ ಆಕ್ಷನ್ ಕಟ್ ಹೇಳಿದ ನಿರ್ದೇಶಕ ಎ.ಟಿ. ರಘು ಅವರು ನಿಧನರಾಗಿದ್ದಾರೆ, ಕಳೆದ 55 ವರ್ಷಗಳಿಂದ ಕನ್ನಡ ಚಿತ್ರರಂಗದಲ್ಲಿ ಬರಹಗಾರರಾಗಿ, ಸಹನಿರ್ದೇಶಕರಾಗಿ, ನಿರ್ದೇಶಕರಾಗಿ, ನಿರ್ಮಾಪಕರಾಗಿ ಮತ್ತು ಕಲಾವಿದರಾಗಿಯೂ ಸಹ ಸೇವೆ ಸಲ್ಲಿಸಿದ್ದ ಹಿರಿಯ ನಿರ್ದೇಶಕ ಎ.ಟಿ. ರಘು ಅವರು ವಯೋಸಹಜ ಅನಾರೋಗ್ಯದಿಂದ ಬಳಲುತ್ತಿದ್ದರು. ರೆಬೆಲ್ ಸ್ಟಾರ್ ಅಂಬರೀಶ್ ಅಭಿನಯದ ಹೆಚ್ಚು ಸಿನಿಮಾಗಳನ್ನು ನಿರ್ದೇಶಿಸಿದ ಹೆಗ್ಗಳಿಕೆ ಇವರದ್ದು. ಇವರು ತಮ್ಮ ವೃತ್ತಿ ಬದುಕಿನಲ್ಲಿ ಆಕ್ಷನ್ ಹಿನ್ನೆಲೆಯ ಚಲನಚಿತ್ರಗಳನ್ನೇ ಹೆಚ್ಚಾಗಿ ನಿರ್ದೇಶನ ಮಾಡಿದ್ದರು. ಆದರೆ, ಇವರ ಕೊನೆಯ ದಿನಗಳು ಅಷ್ಟೊಂದು ಚೆನ್ನಾಗಿರಲಿಲ್ಲ, ನಿರ್ದೇಶಕ ಎ.ಟಿ. ರಘು ಅವರಿಗೆ 76 ವರ್ಷ ವಯಸ್ಸಾಗಿತ್ತು. ಕಳೆದ ಕೆಲ ವರ್ಷಗಳಿಂದ ಅನಾರೋಗ್ಯದಿಂದ ಬಳಲುತ್ತಿದ್ದ ಅವರು ಮೂತ್ರಪಿಂಡ ವೈಫಲ್ಯದಿಂದಾಗಿ ಡಯಾಲಿಸಿಸ್ ಮಾಡಿಸಿಕೊಳ್ಳುತ್ತಿದ್ದರು. ಅಲ್ಲದೆ, ಎರಡು ಕಾಲು, ಕಣ್ಣು, ಹೃದಯದ ಶಸ್ತ್ರಚಿಕಿತ್ಸೆಗೂ ಸಹ ಒಳಗಾಗಿದ್ದರು. ತುಂಬಾ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದ ಚಿತ್ರರಂಗದವರಲ್ಲಿ ಆರ್ಥಿಕ ನೆರವನ್ನು ಸಹ ಕೇಳಿದ್ದರು. ಎ.ಟಿ. ರಘು ಅವರು 1965ರಲ್ಲಿ ಚಿಕ್ಕ ಪಾತ್ರ ನಿರ್ವಹಿಸುವ ಮೂಲಕ ಚಿತ್ರರಂಗಕ್ಕೆ ಎಂಟ್ರಿ ಕೊಟ್ಟಿದ್ದರು, ಅನಂತರ ಸಹ ನಿರ್ದೇಶಕನಾಗಿ, ಬರಹಗಾರನಾಗಿ, ನಿರ್ದೇಶಕನಾಗಿ ಸುಮಾರು 40ಕ್ಕೂ ಅಧಿಕ ಚಿತ್ರಗಳಿಗೆ ಆಕ್ಷನ್ ಕಟ್ ಹೇಳಿದ್ದಾರೆ. 1994ರಲ್ಲಿ ಅವರು ನಿರ್ದೇಶಿಸಿದ 'ಮಂಡ್ಯದ ಗಂಡು' ದೊಡ್ಡ ಹೆಸರು ಮಾಡಿತ್ತು. ಆ ಚಿತ್ರ ರೆಬೆಲ್‌ಸ್ಟಾರ್ ಅಂಬರೀಶ್ ಅವರ ವೃತ್ತಿಬದುಕಿಗೆ ದೊಡ್ಡ ಹೆಸರು ತಂದುಕೊಟ್ಟಿತ್ತು. ☯




# ನೀ ಬರುವೆ ಅಂತ.... ಇದು ಬ್ಯಾಡ್ ಪ್ರೇಮಗೀತೆ

ಎಸ್.ಆರ್. ವೆಂಕಟೇಶ್ ಗೌಡ ನಿರ್ಮಿಸಿರುವ ಹಾಗೂ ನಕುಲ್ ಗೌಡ ನಾಯಕನಾಗಿ ನಟಿಸಿರುವ ಬಹು ನಿರೀಕ್ಷಿತ ಬ್ಯಾಡ್ ಚಿತ್ರಕ್ಕಾಗಿ ಸಾಹಿತಿ ಕವಿರಾಜ್ ಅವರು ಬರೆದಿರುವ ನೀ ಬರುವೆ ಅಂತ ನಾ ಕಾದು ಕುಂತ ಎಂಬ ಸುಂದರ ಪ್ರೇಮಗೀತೆ ಇತ್ತೀಚೆಗೆ ಜಂಕಾರ್ ಮ್ಯೂಸಿಕ್ ಮೂಲಕ ಬಿಡುಗಡೆಯಾಗಿದೆ. ಅರ್ಜುನ್ ಜನ್ಯ ಅವರ ಸಂಗೀತ ಸಂಯೋಜನೆಯಲ್ಲಿ ಮೂಡಿಬಂದಿರುವ ಈ ಹಾಡನ್ನು ಸರಿಗಮಪ ಖ್ಯಾತಿಯ ಪೃಥ್ವಿ ಭಟ್ ಅವರು ಸುಶ್ರಾವ್ಯವಾಗಿ ಹಾಡಿದ್ದಾರೆ. ಈ ಹಾಡು ಜನಮನ ಸೂರೆಗೊಳ್ಳುತ್ತಿದ್ದು ಅಧಿಕ ಸಂಖ್ಯೆಯಲ್ಲಿ ವೀಕ್ಷಣೆಯಾಗುತ್ತಿದೆ. ನಾಯಕ ನಕುಲ್‌ಗೌಡ ಹಾಗೂ ನಾಯಕಿ ಮಾನ್ವಿತ ಹರೀಶ್ ಈ ಹಾಡಿನಲ್ಲಿ ಅಭಿನಯಿಸಿದ್ದಾರೆ. ನಾಯಕನ ಬರುವಿಕೆಗಾಗಿ ಕಾದು ಕುಳಿತಿರುವ ನಾಯಕಿ, ಕಾಯುವಿಕೆಯ ಆ ಸಮಯದಲ್ಲಿ ಏನೆಲ್ಲವನ್ನು ಕಲ್ಪಿಸಿಕೊಳ್ಳುತ್ತಾಳೆ ಎಂಬುದನ್ನು ಈ ಹಾಡಿನ ಮೂಲಕ ತೋರಿಸಲಾಗಿದೆ ಎಂದು ತಿಳಿಸಿರುವ ನಿರ್ದೇಶಕ ಪಿ.ಸಿ.ಶೇಖರ್, ಕಾಮ, ಕ್ರೋಧ, ಲೋಭ,ಮೋಹ ಮೊದಲಾದ ಅರಿಷಡ್ವರ್ಗಗಳನ್ನು ಪ್ರತಿನಿಧಿಸುವ ಆರು ಪಾತ್ರಗಳಲ್ಲಿ ಆರು ಜನ ಕಲಾವಿದರು ಅಭಿನಯಿಸಿರುವುದು ಈ ಚಿತ್ರದ ವಿಶೇಷ ಎನ್ನುತ್ತಾರೆ.



ಈಗಾಗಲೇ ಬ್ಯಾಡ್ ಚಿತ್ರದ ಚಿತ್ರೀಕರಣ ಹಾಗೂ ಚಿತ್ರೀಕರಣ ನಂತರದ ಚಟುವಟಿಕೆಗಳು ಮುಕ್ತಾಯವಾಗಿದೆ. ಟೀಸರ್ ಮೂಲಕ ಸದ್ದು ಮಾಡುತ್ತಿರುವ ಈ ಚಿತ್ರದ ಹಾಡುಗಳು ಸಹ ಜನಪ್ರಿಯವಾಗುತ್ತಿದೆ. ಅರ್ಜುನ್ ಜನ್ಯ ಅವರ ಸಂಗೀತ ನಿರ್ದೇಶನವಿರುವ ಬ್ಯಾಡ್ ಚಿತ್ರಕ್ಕೆ ನಿರ್ದೇಶಕ ಪಿ.ಸಿ.ಶೇಖರ್ ಅವರೆ ಸಂಕಲನ ಕಾರ್ಯ ನಿರ್ವಹಿಸಿದ್ದಾರೆ. ಜಿ.ರಾಜಶೇಖರ್ ಅವರ ಕಲಾ ನಿರ್ದೇಶನ ಹಾಗೂ ಶಕ್ತಿ ಶೇಖರ್ ಅವರ ಛಾಯಾಗ್ರಹಣವಿರುವ ಬ್ಯಾಡ್ ಚಿತ್ರಕ್ಕೆ ಸಚಿನ್ ಜಗದೀಶ್ವರ್ ಎಸ್ ಬಿ. ಅವರು ಸಂಭಾಷಣೆಗಳನ್ನು ಬರೆದಿದ್ದಾರೆ. ☯



# ಮಾಜಿ ಪ್ರಿಯಕರನ ಬಗ್ಗೆ ಮೌನ ಮುರಿದ ನಟಿ ಎರಿಕಾ!

ಸಿನಿಮಾ ತಾರೆಯರ ವೈಯಕ್ತಿಕ ಜೀವನದಲ್ಲಿ ಪ್ರೀತಿ, ಬ್ರೇಕಪ್, ಮದುವೆ, ವಿಚ್ಛೇದನ ಸಾಮಾನ್ಯ ಎಂಬಂತಾಗಿದೆ. ಅದರಲ್ಲೂ ಇತ್ತೀಚಿನ ದಿನಗಳಲ್ಲಿ ದಿನಕ್ಕೊಂದು ಪ್ರೀತಿ-ಗಲಾಟೆ ಸುದ್ದಿಗಳು ಸದ್ದು ಮಾಡುತ್ತಿರುತ್ತವೆ. ಆದರೆ, ಕನ್ನಡದ 'ನಿನ್ನಿಂದಲೇ', 'ಬುಗುರಿ' ಸೇರಿ ತೆಲುಗು, ತಮಿಳು, ಹಿಂದಿಯಲ್ಲೂ ನಟಿಸಿರುವ ಎರಿಕಾ ಫರ್ನಾಂಡಿಸ್, ತಮ್ಮ ಖಾಸಗಿ ಜೀವನದ ಬಗ್ಗೆ ಮೊದಲಿನಿಂದಲೂ ಮೌನವಹಿಸಿದ್ದರು. ಕೆಲ ವರ್ಷಗಳಿಂದ ಹಿಂದಿ ಕಿರುತೆರೆಯಲ್ಲಿ ಬಿಜಿಯಾಗಿದ್ದು, ಮುಂಬೈನಲ್ಲಿ ಸೆಟಲ್ ಆಗಿರುವ ಅವರು, ಇದೇ ಮೊದಲ ಬಾರಿಗೆ ತಮ್ಮ ಲವ್ ಮತ್ತು ಬ್ರೇಕಪ್ ಬಗ್ಗೆ ಮುಕ್ತವಾಗಿ ಮಾತನಾಡಿದ್ದಾರೆ. 'ನನ್ನ ಜೀವನದಲ್ಲಿ ಎದುರಿಸಿದ ಆಘಾತಗಳು ಮತ್ತು ಆದ ಅನುಭವಗಳೇ ನನ್ನನ್ನು ಇಂದಿನ ವ್ಯಕ್ತಿಯಾಗಿಸಿವೆ. ಪೊಲೀಸರ ಬಳಿ ಹೋದರೆ, ಅದೇ ದೊಡ್ಡ ಸುದ್ದಿಯಾಗುತ್ತದೆ. ಜತೆಗೆ ನನಗೆ ನ್ಯಾಯ ಸಿಗುತ್ತದೆ ಎಂಬ ನಂಬಿಕೆಯೂ ಇಲ್ಲ. ಹೀಗಾಗಿ ನಾನು ಹಿಂದಿನ ರಿಲೇಷನ್‌ಶಿಪ್‌ನಲ್ಲಿ ಎದುರಿಸಿದ ದೌರ್ಜನ್ಯದ ಬಗ್ಗೆ ಎಲ್ಲಿಯೂ ಮಾತನಾಡಿರಲಿಲ್ಲ. ಬದಲಾಗಿ ಅದನ್ನು ನಾನೇ ಎದುರಿಸಿದೆ, ಅನುಭವಿಸಿದೆ ಕೊನೆಗೆ ಅದರಿಂದ ಹೊರಬಂದೆ. ಆದರೆ, ಅದರಿಂದ ಹೊರಬಂದ ಬಳಿಕವೂ ಆ ಗಾಯದ ಕಲೆ ಮಾತ್ರ ನನ್ನಲ್ಲಿ ಹಾಗೇ ಉಳಿದಿದೆ' ಎಂದು ಮಾಜಿ ಪ್ರಿಯಕರನ ಹೆಸರು ಹೇಳದೆಯೇ, ತಾವು ಎದುರಿಸಿದ ಕಷ್ಟಗಳ ಬಗ್ಗೆ ಹೇಳಿಕೊಂಡಿದ್ದಾರೆ ನಟಿ ಎರಿಕಾ ಫರ್ನಾಂಡಿಸ್. ಸದ್ಯ ಎರಿಕಾಗೆ ಸಮಸ್ಯೆ ಮಾಡಿದ ಆ ಮಾಜಿ ಪ್ರಿಯಕರ ಯಾರು ಎಂಬುದರ ಬಗ್ಗೆ ಜಾಲತಾಣದಲ್ಲಿ ಚರ್ಚೆ ನಡೆದಿದೆ. ☯

Vol. 40 No. 42 Edited, Printed, Published & Owned by M. RAHUL, Printed by him at Shri Omkar Printers, # 4/1, Mahimappa Industrial Estate, Near PIA Bhavan, 100ft Road, Jalahalli Cross, Chokkasandra, T. Dasarahalli Post, BANGALORE-560 057. ☎ 080-23588510, 9513892666
Email: policenewsreporter@gmail.com